# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಡಾ॥ ಸೂರಜ್ ರೇವಣ್ಣ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 648

ಉತ್ತರಿಸಬೇಕಾದ ದಿನಾಂಕ : 22-02-2022

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಬೀದಿ ವ್ಯಾಪಾರಿಗಳು ಹಾಗೂ ತಳ್ಳುಗಾಡಿಯ ವ್ಯಾಪಾರಿಗಳು, ವ್ಯಾಪಾರದ ಉದ್ದೇಶಕ್ಕೆ ಮೀಟರ್ ಬಡ್ಡಿ ವ್ಯಕ್ತಿಗಳಿಂದ ಹಾಗೂ ಖಾಸಗಿ ಲೇವಾದೇವಿದಾರರಿಂದ ಸಾಲ ಪಡೆದು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ | ಬಂದಿದ್ದಲ್ಲಿ, ಸದರಿ ಬಡ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಬೀದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಿ ಜೀವ ನಿರ್ವಹಣೆಗೆ ಅನುಕೂಲವಾಗುವ ದೃಷ್ಟಿಯಿಂದ ಈ ಹಿಂದೆ ಇದ್ದಂತಹ ಬಡವರ ಬಂಧು ಯೋಜನೆಯನ್ನು ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ: (ಸಂಪೂರ್ಣ ಮಾಹಿತಿ ನೀಡುವುದು) | ಬಡ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಬೀದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಿ ಜೀವ ನಿರ್ವಹಣೆಗೆ ಅನುಕೂಲವಾಗುವ ದೃಷ್ಟಿಯಿಂದ, ಸದರಿ ವ್ಯಾಪಾರಿಗಳು "ಬಡವರ ಬಂಧು" ಯೋಜನೆಯಲ್ಲಿ ಪಡೆದ ಸಾಲಗಳ ಪೈಕಿ ದಿನಾಂಕ:29.03.2021ಕ್ಕೆ ಹೊರಬಾಕಿ ಹೊಂದಿರುವ ಅಸಲು ಮತ್ತು ಬಡ್ಡಿ ಸೇರಿ ಒಟ್ಟು ರೂ.7.62 ಕೋಟಿಗಳ ಮೊತ್ತವನ್ನು ಮನ್ನಾ ಮಾಡಿ ಈ ಯೋಜನೆಯನ್ನು ಮುಕ್ತಾಯಗೊಳಿಸಲು ಆದೇಶ ಹೊರಡಿಸಲಾಗಿರುತ್ತದೆ.<br><br>ಕೇಂದ್ರ ಸರ್ಕಾರದ 'ಪಿಎಂ ಸ್ವನಿಧಿ' ಯೋಜನೆ ಹಾಗೂ ರಾಜ್ಯ ಸರ್ಕಾರದ 'ಬಡವರ ಬಂಧು' ಯೋಜನೆಯ ಅಂಶಗಳು ಒಂದೇ ರೀತಿಯಿದ್ದು ಫಲಾನುಭವಿಗಳ ಆಯ್ಕೆಯಲ್ಲಿ ಸಮಸ್ಯೆಯುಂಟಾಗುತ್ತಿರುವುದರಿಂದ, ರಾಜ್ಯ ಸರ್ಕಾರದ 'ಬಡವರ ಬಂಧು' ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ.<br><br>ಈ ಹಿಂದೆ ಇದ್ದಂತಹ ಬಡವರ ಬಂಧು ಯೋಜನೆಯನ್ನು ಮತ್ತೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

| | | |
|---|---|---|
| ಇ | ರಾಜ್ಯದ ಮಧ್ಯಮ ಹಾಗೂ ಬಡ ಕುಟುಂಬ ಮಹಿಳೆಯರು ಸ್ವಾವಲಂಬಿಗಳಾಗಿ ಜೀವನ ನಡೆಸಲು ಆರ್ಥಿಕವಾಗಿ ಬಲಹೀನರಾಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ | ಬಂದಿದ್ದಲ್ಲಿ, ಈ ಹಿಂದೆ ಇದ್ದಂತಹ ಗೃಹಲಕ್ಷ್ಮೀ ಯೋಜನೆಯನ್ನು ಪುನರ್ ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಮಹಿಳೆಯರ ಸ್ವಾವಲಂಬನೆಯ ದೃಷ್ಟಿಯಿಂದ ಶೂನ್ಯ ಬಡ್ಡಿದರದಲ್ಲಿ ರೂ.3.00 ಲಕ್ಷಗಳವರೆಗೆ ಅಲ್ಪಾವಧಿ ಬೆಳೆಸಾಲ ನೀಡುವ ಯೋಜನೆಯಡಿಯಲ್ಲಿ ಸಾಲ ಪಡೆಯಲು ಅವಕಾಶವಿದೆ. ಅದೇ ರೀತಿ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಶೂನ್ಯ ಬಡ್ಡಿದರದಲ್ಲಿ ರೂ.5.00 ಲಕ್ಷಗಳವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ. ಇದರ ಸದುಪಯೋಗವನ್ನು ಮಹಿಳೆಯರು ಪಡೆಯಲು ಅವಕಾಶವಿರುತ್ತದೆ.<br><br>ಗೃಹಲಕ್ಷ್ಮೀ ಯೋಜನೆಯನ್ನು ಪುನರ್ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ, |

**ಸಂಖ್ಯೆ ಸಿಒ 56 ಸಿಎಲ್‌ಎಸ್ 2022**

**(ಎಸ್. ಟಿ. ಸೋಮಶೇಖರ್)**

ಸಹಕಾರ ಸಚಿವರು